No. of schools to EDUCOMP Koramangala, Bangalore-34

Sl No	Name of district	Cat A	Cat B	Cat C	Total
1	Kolar	6	7	26	39
2	Chickmagalur	8	0	3	11
					50
	Total	**1000 Schools**			

ರಾಜ್ಯದಲ್ಲಿ ಅರೆಕಾಲಿಕ ಶಿಕ್ಷಕರುಗಳನ್ನು ಖಾಯಂಗೊಳಿಸುವುದು

260 (531) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮಾಂಣ) - ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದ ಸರ್ಕಾರಿ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅರೆಕಾಲಿಕ ಶಿಕ್ಷಕರುಗಳ ಸಂಖ್ಯೆ ಎಷ್ಟು ;

ಆ) ಈ ಶಿಕ್ಷಕರುಗಳು ಎಷ್ಟು ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ ; ಇವರುಗಳಿಗೆ ನೀಡುತ್ತಿರುವ ವೇತನ ಎಷ್ಟು ;

ಇ) ಈ ಶಿಕ್ಷಕರುಗಳನ್ನು ಯಾವಾಗ ಖಾಯಂಗೊಳಿಸಲಾಗುವುದು ?

ಪ್ರೊ।। ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ)ಆ) ಸರ್ಕಾರಿ ಪ್ರೌಢ ಶಾಲೆಗಳಲ್ಲಿ 654 ಅರೆಕಾಲಿಕ ಶಿಕ್ಷಕರು ಸುಮಾರು ಕಳೆದ 10-12 ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ.

ಪದವಿ ಪೂರ್ವ ಕಾಲೇಜುಗಳಲ್ಲಿ 19 ಅರೆಕಾಲಿಕ ಉಪನ್ಯಾಸಕರುಗಳು ಸುಮಾರು 5 ರಿಂದ 14 ವರ್ಷ ಸೇವೆ ಸಲ್ಲಿಸುತ್ತಿದ್ದಾರೆ. ಹುದ್ದೆಗೆ ನಿಗಧಿಯಾದ ಕನಿಷ್ಠ ವೇತನ ನೀಡಲಾಗುತ್ತಿದೆ.

ಇ) ಸದ್ಯಕ್ಕೆ ಈ ಪ್ರಸ್ತಾವನೆ ಸರ್ಕಾರದ ಮುಂದೆ ಇಲ್ಲ.

ಅನುದಾನಿತ ಕಾನೂನು ಕಾಲೇಜುಗಳ ಸಿಬ್ಬಂದಿಗೆ ಯು ಜಿ ಸಿ ವೇತನ

261 (532) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮಾಂಣ) - ಮಾನ್ಯ ಪ್ರಾಥಮಿಕ ಮತ್ತು ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಅನುದಾನಿತ ಕಾನೂನು ಕಾಲೇಜುಗಳ ಸಂಖ್ಯೆ ಎಷ್ಟು ; ಇಲ್ಲಿ ಕೆಲಸ ಮಾಡುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

ಆ) ಇವರುಗಳಿಗೆ ಯು.ಜಿ.ಸಿ. ವೇತನವನ್ನು ನೀಡಲಾಗುತ್ತಿದೆಯೇ ; ಇಲ್ಲದಿದ್ದರೆ, ಕಾರಣವೇನು;

ಇ) ಈ ಅನುದಾನಿತ ಕಾನೂನು ಕಾಲೇಜುಗಳಿಗೆ ಯು.ಜಿ.ಸಿ. ವೇತನವನ್ನು ಯಾವಾಗಿನಿಂದ ಜಾರಿಗೊಳಿಸಲಾಗುವುದು ?

ಡಾ।। ಜಿ. ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು)

ಅ) ಪ್ರಸ್ತುತ 08 ಅನುದಾನಿತ ಕಾನೂನು ಕಾಲೇಜುಗಳಿವೆ. ಒಟ್ಟು ಸಿಬ್ಬಂದಿಯ ಸಂಖ್ಯೆ 145.

ಆ) ಇಲ್ಲ

ಕಾನೂನು ಕಾಲೇಜುಗಳಲ್ಲಿನ ಬೋಧಕರಿಗೆ ಯುಜಿಸಿ ವೇತನ ಶ್ರೇಣಿಯನ್ನು ವಿಸ್ತರಿಸುವಲ್ಲಿ ದಿನಾಂಕ 1-1-96 ರಿಂದ 31.3.2002ರ ಅವಧಿಗೆ ಶೇ. 80ರಷ್ಟು ಪಾಲನ್ನು ದೊರಕಿಸಿ ಕೊಡುವಂತೆ ಕೇಂದ್ರ ಸರ್ಕಾರವನ್ನು ಕೇಳಲಾಗಿತ್ತು. ಆದರೆ ಕೇಂದ್ರ ಸರ್ಕಾರವು ದಿ 12.8.2002 ರಂದು ರಾಜ್ಯ ಸರ್ಕಾರಕ್ಕೆ ಬರೆದ ಪತ್ರದಲ್ಲಿ ಸದರಿ ಪ್ರಸ್ತಾವನೆಯನ್ನು ಒಪ್ಪಿಕೊಳ್ಳದೆ ನಿರಾಕರಿಸಿರುತ್ತದೆ. ಈ ಅಂಶವನ್ನು ಪುನರ್ ಪರಿಶೀಲಿಸುವಂತೆ ಕೋರಿ ದಿ 29.7.02 ರಂದು ಮತ್ತು 24.12.02 ರಂದು ಪತ್ರ ಬರೆಯಲಾಗಿದೆ. ಈ ಮಧ್ಯೆ ಶೇ. 100 ರಷ್ಟು ಅನುದಾನ ದೊರಕಿಸಿ ಕೊಡುವಂತೆ ಆರ್ಥಿಕ ಇಲಾಖೆಯನ್ನು ಕೋರಲಾಗಿ, ಉಪನ್ಯಾಸಕರುಗಳ ವಿದ್ಯಾರ್ಹತೆ ಈಗಿನ ವೇತನ ಶ್ರೇಣಿ ಪೂರ್ಣಕಾಲಿಕ ಉಪನ್ಯಾಸಕರುಗಳ ವಿವರ ಮತ್ತು ಯುಜಿಸಿ ವೇತನ ಶ್ರೇಣಿಗಳನ್ನು ವಿಸ್ತರಿಸುವುದರಿಂದ ಭರಿಸಬೇಕಾದ ಆರ್ಥಿಕ ಹೊರೆಯ ವಿವರ ಮತ್ತಿತರ ಅಂಶಗಳ ಬಗ್ಗೆ ವಿವರಗಳನ್ನು ಆರ್ಥಿಕ ಇಲಾಖೆ ಬಯಸಿದೆ. ಈ ಮಾಹಿತಿಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ಕೇಂದ್ರ ಸರ್ಕಾರದ ನೆರವು ಹಾಗೂ ಆರ್ಥಿಕ ಇಲಾಖೆಯ ಸಹಮತಿಯನ್ನು ಪಡೆದ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಬ್ರಹ್ಮಾವರ ವಿಧಾನ ಸಭಾ ಕ್ಷೇತ್ರದಲ್ಲಿ ಸರ್ಕಾರಿ ಪ್ರೌಢಶಾಲಾ ಶಿಕ್ಷಕರ ವರ್ಗಾವಣೆ

262 (113) ಶ್ರೀ ಜಯಪ್ರಕಾಶ್ ಹೆಗ್ಡೆ ಕೆ. (ಬ್ರಹ್ಮಾವರ) :- ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬ್ರಹ್ಮಾವರ ವಿಧಾನಸಭಾ ಕ್ಷೇತ್ರದಲ್ಲಿರುವ ಸರ್ಕಾರಿ ಪ್ರೌಢಶಾಲೆಗಳ ಸಂಖ್ಯೆ ಎಷ್ಟು ;

ಆ) ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಮುಖ್ಯೋಪಾಧ್ಯಾಯರು ಇದ್ದಾರೆಯೇ ;

ಇ) ಎಷ್ಟು ಮಂದಿ ಮುಖ್ಯೋಪಾಧ್ಯಾಯರಿಗೆ ಈ ಬಾರಿ ಶಾಲೆ ಪ್ರಾರಂಭವಾದ ಮೇಲೆ ವರ್ಗಾವಣೆ ಆಗಿದೆ ; ವರ್ಗಾವಣೆ ಮಾಡಲು ಕಾರಣಗಳೇನು ; ಯಾವಾಗ ವರ್ಗಾವಣೆ ಮಾಡಲಾಯಿತು ; (ದಿನಾಂಕಗಳೊಂದಿಗೆ ವಿವರ ನೀಡುವುದು) ?

ಪ್ರೊ।। ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು)

ಅ) ಒಟ್ಟು 13

ಆ) 7 ಶಾಲೆಗಳಲ್ಲಿ ಇದ್ದಾರೆ.

ಇ) ಒಟ್ಟು 6 ಮಂದಿ ಮುಖ್ಯೋಪಾಧ್ಯಾಯರ ವರ್ಗಾವಣೆ ಆಗಿರುತ್ತದೆ. ಕೋರಿಕೆ ಹಾಗೂ ಸಾರ್ವಜನಿಕ ಹಿತದೃಷ್ಟಿಯಿಂದ ಮಾಡಲಾಗಿದೆ. ಅನುಬಂಧದಲ್ಲಿ ವಿವರಗಳನ್ನು ನೀಡಲಾಗಿದೆ.

ಅನುಬಂಧ

ಕ್ರಮ ಸಂಖ್ಯೆ	ಮುಖ್ಯ ಶಿಕ್ಷಕರ ಹೆಸರು ಮತ್ತು ವಿಳಾಸ	ವರ್ಗಾವಣೆ ಹೊಂದಿದ ಶಾಲೆ	ಬಿಡುಗಡೆ ದಿನಾಂಕ	ಯಾವ ಕಾರಣದಿಂದಾಗಿ ವರ್ಗಾಯಿಸಲಾಗಿದೆ
1	2	3	4	5
	ಶ್ರೀಯುತ			
1.	ಎಂ. ಮಂಜುನಾಥಸ್ವಾಮಿ ಮುಖ್ಯಶಿಕ್ಷಕರು, ಸರ್ಕಾರಿ ಪ್ರೌಢಶಾಲೆ, ಉಪ್ಪೂರು, ಉಡುಪಿ ತಾಲ್ಲೂಕು	ಮುಖ್ಯ ಶಿಕ್ಷಕರು ಸರ್ಕಾರಿ ಪ್ರೌಢಶಾಲೆ, ಎಲೆಚಿಕ್ಕಹಳ್ಳಿ ಹೊನ್ನಾಳಿ ತಾಲ್ಲೂಕು ದಾವಣಗೆರೆ ಜಿಲ್ಲೆ	30.10.2002	ಕೋರಿಕೆ ಮೇಲೆ